**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ.ಸಿ. ನಂ. 89/2020**

**ಚಾ.ಸಾಃ 5, ಫ್ರಾ.ಸಾಃ 13**

| | |
|---|---|
| ಸಾಕ್ಷಿದಾರನ ಹೆಸರು | ನಿತಿನ್ ನಾಯ್ಕ |
| ತಂದೆಯ ಹೆಸರು | ನೀಲಕಂಠ ನಾಯ್ಕ |
| ವಯಸ್ಸು | 32 ವರ್ಷಗಳು |
| ಉದ್ಯೋಗ | ಚಾಲಕ |
| ವಾಸ್ತವ್ಯ | ದುರ್ಗಾಕೇರಿ, ಬಾಂದೇಗದ್ದೆ, ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 06-12-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನ್ಯಾಯಾಲಯದ ಮುಂದಿರುವ ಆರೋಪಿಗಳನ್ನು ನೋಡಿರುತ್ತೇನೆ.

ಈಗ್ಗೆ 6 ವರ್ಷಗಳ ಹಿಂದೆ ಪೋಲೀಸರು ನನ್ನನ್ನು ಕುಮಟಾದ ಮಣಪ್ಪುರಂ ಕಚೇರಿಗೆ ಕರೆದುಕೊಂಡು ಹೋಗಿದ್ದರು. ಅಲ್ಲಿದ್ದವರು ಪೋಲೀಸರಿಗೆ ಒಂದು ಕವರನ್ನು ಕೊಟ್ಟರು. ಆ ಕಾಲಕ್ಕೆ ಒಂದು ಪಂಚನಾಮೆಗೆ ನನ್ನ ಸಹಿ ತೆಗೆದುಕೊಂಡಿರುತ್ತಾರೆ. ಸದರಿ ಪಂಚನಾಮೆಯ ದೃಢೀಕೃತ ನಕಲನ್ನು ನೋಡುತ್ತಿದ್ದು ನಿಪಿ-17 ಎಂದು ಗುರುತಿಸಿದ್ದು ಸಾಕ್ಷಿ ಸಹಿಯನ್ನು ನಿಪಿ-17(ಬಿ) ಎಂದು ಗುರುತಿಸಲಾಯಿತು.

ಪಂಚನಾಮೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.

**(ಈ ಸಂದರ್ಭದಲ್ಲಿ ಸ.ಸ.ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲಿಗೆ ಒಳಪಡಿಸಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

**ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ,**

ದಿನಾಂಕ 01-08-2020 ರಂದು ಪೋಲಿಸರು ನನ್ನನ್ನು ಕುಮಟಾದ ಮಣಪ್ಪುರಂ ಫೈನಾನ್ಸಗೆ ಕರೆದುಕೊಂಡು ಹೋಗಿದ್ದು ಅಲ್ಲಿ ಮ್ಯಾನೇಜರವರು ಆರೋಪಿತರು ಗಿರವಿ ಇಟ್ಟಿದ್ದ ಬಂಗಾರಗಳನ್ನು ನನ್ನ ಸಮಕ್ಷಮ ಹಾಜರುಪಡಿಸಿದ್ದು ಪೋಲೀಸರು ಅವುಗಳನ್ನು ನಿಪಿ-17ರ ಪಂಚನಾಮೆ ಅಡಿಯಲ್ಲಿ ಅಮಾನತ್ತುಪಡಿಸಿಕೊಂಡು ನನ್ನ ಸಹಿ ತೆಗೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ನಿಪಿ-17ರ ವಿಚಾರಗಳು ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಾದ ಶ್ರೀ ವಿ. ಎಂ. ಭಂಡಾರಿಯವರು ಇರುವುದಿಲ್ಲ ಎಂದು ಹೇಳಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

Sd/-

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**